**ಕರ್ನಾಟಕ ಸರ್ಕಾರ**

**ಸಂಖ್ಯೆ:** ಗ್ರಾಅಪ 58 ಪಬವ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 07.04.2022

**ಅಧಿಸೂಚನೆ**

ಕರ್ನಾಟಕ ಗೆಜೆಟೆಡ್ ಪ್ರೊಬೆಷನರುಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕ) ನಿಯಮಾವಳಿ 1997ರಡಿಯಲ್ಲಿ ಕರ್ನಾಟಕ ಲೋಕಸೇವಾ ಆಯೋಗವು ಒಟ್ಟು 08 ಅಭ್ಯರ್ಥಿಗಳನ್ನು ಹೈದ್ರಾಬಾದ್ ಕರ್ನಾಟಕ ಪ್ರದೇಶದ ಸ್ಥಳೀಯ ವೃಂದದ ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ, ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ)ಯ ವೃಂದ-ಎ (ಕಿರಿಯ ಶ್ರೇಣಿ)ಯ ಕಾರ್ಯನಿರ್ವಾಹಕ ಅಧಿಕಾರಿ/ಸಹಾಯಕ ಕಾರ್ಯದರ್ಶಿ(ಪಂಚಾಯತ್ ರಾಜ್) ಹುದ್ದೆಗೆ ಆಯ್ಕೆ ಮಾಡಿ ಅಂತಿಮ ಆಯ್ಕೆ ಪಟ್ಟಿಯನ್ನು ಅಧಿಸೂಚನೆ ಸಂಖ್ಯೆ:E(I)2564/2019-20/PSC, ದಿನಾಂಕ:10.01.2020ರಲ್ಲಿ ಪ್ರಕಟಿಸಿರುತ್ತದೆ.

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ:10.01.2020ರಂದು ಪ್ರಕಟಿಸಿರುವ ಅಂತಿಮ ಆಯ್ಕೆ ಪಟ್ಟಿಯನ್ವಯ, ಆಯ್ಕೆಯಾಗಿರುವ ಒಟ್ಟು 08 ಹೈದ್ರಾಬಾದ್ ಕರ್ನಾಟಕ ಪ್ರದೇಶದ ಸ್ಥಳೀಯ ವೃಂದದ ಅಭ್ಯರ್ಥಿಗಳ ಪೈಕಿ ಈ ಕೆಳಕಂಡ ಅಭ್ಯರ್ಥಿಗೆ ವೇತನ ಶ್ರೇಣಿ: ರೂ. 52,650 97,100/-ರ ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ)ಯ ವೃಂದ-ಎ (ಕಿರಿಯ ಶ್ರೇಣಿ)ಯ ಕಾರ್ಯನಿರ್ವಾಹಕ ಅಧಿಕಾರಿ/ಸಹಾಯಕ ಕಾರ್ಯದರ್ಶಿ (ಪಂಚಾಯತ್ ರಾಜ್) ಹುದ್ದೆಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ, ಕರ್ನಾಟಕ ನಾಗರೀಕ ಸೇವಾ (ಪರಿವೀಕ್ಷಣಾ) ನಿಯಮಾವಳಿ 1977ರ ನಿಯಮ 3 ರನ್ವಯ, ಎರಡು ವರ್ಷಗಳ ಪರಿವೀಕ್ಷಣೆಯ ಮೇಲೆ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗೊಳಪಡಿಸಿ ನೇಮಕ ಮಾಡಲಾಗಿದೆ.

| ಕ್ರಮ ಸಂಖ್ಯೆ | ಕರ್ನಾಟಕ ಲೋಕಸೇವಾ ಆಯೋಗದ ಆಯ್ಕೆಪಟ್ಟಿಯಲ್ಲಿನ ಜೇಷ್ಠತಾ ಕ್ರಮಾಂಕ | ಅಭ್ಯರ್ಥಿಯ ಹೆಸರು ಮತ್ತು ವಿಳಾಸ (ಶ್ರೀ/ಶ್ರೀಮತಿ) | ಆಯ್ಕೆಯಾಗಿರುವ ಮೀಸಲಾತಿ ವರ್ಗೀಕರಣ |
|---|---|---|---|
| 1 | 07 | ಮೊಹಮ್ಮದ್ ಅಕ್ರಮ್ ಪಾಷಾ ಬಿನ್ ಸರದಾರ್ ಸಾಬ್, ಮೊಹಲ್ಲಾ ಹುಸೈನಿ ಆಲಂ, ಮನೆ ಸಂಖ್ಯೆ: 01-106, ಚಿಟಗುಪ್ಪ ಪೋಸ್ಟ್, ಹುಮ್ನಾಬಾದ್ ತಾಲ್ಲೂಕು, ಬೀದರ್ ಜಿಲ್ಲೆ | 2B |

**-:ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳು:-**

1. ಮೇಲ್ಕಂಡ ಅಭ್ಯರ್ಥಿಯನ್ನು ರೂ 52,650-97,100/- ರ ವೇತನ ಶ್ರೇಣಿಯ ವೃಂದ-ಎ (ಕಿರಿಯ ಶ್ರೇಣಿ) ಕಾರ್ಯನಿರ್ವಾಹಕ ಅಧಿಕಾರಿ / ಸಹಾಯಕ ಕಾರ್ಯದರ್ಶಿ ಹುದ್ದೆಗೆ ಕರ್ನಾಟಕ ನಾಗರಿಕ ಸೇವಾ (ಪರಿವೀಕ್ಷಣಾ) ನಿಯಮಾವಳಿ 1977 ರ ನಿಯಮ-3 ರನ್ವಯ ಪರಿವೀಕ್ಷಣೆ ಮೇಲೆ (ON PROBATION) ನೇಮಕ ಮಾಡಲಾಗಿದೆ.

2. ಕರ್ನಾಟಕ ಸರ್ಕಾರಿ ನೌಕರರ ಜೇಷ್ಠತಾ ನಿಯಮಗಳು 1957 ರ ನಿಯಮ 5(2)ರನ್ವಯ ಕರ್ನಾಟಕ ಲೋಕಸೇವಾ ಆಯೋಗದ ಅಂತಿಮ ಆಯ್ಕೆ ಪಟ್ಟಿಯಲ್ಲಿರುವಂತೆ ಜೇಷ್ಠತಾ ಕ್ರಮಾಂಕವನ್ನು ನಿಗದಿಪಡಿಸಲಾಗುವುದು.

3. ಅಭ್ಯರ್ಥಿಯು ವೈದ್ಯಕೀಯ ತಪಾಸಣಾ ಪ್ರಮಾಣ ಪತ್ರ ಹಾಗೂ ಪೊಲೀಸ್ ಪರಿಶೀಲನಾ ವರದಿಯನ್ನು 15 ದಿನಗಳ ಒಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

4. ಅಭ್ಯರ್ಥಿಯ ಸಿಂಧುತ್ವ ಪ್ರಮಾಣ ಪತ್ರ, ಪೊಲೀಸ್ ಪರಿಶೀಲನಾ ವರದಿ, ವೈದ್ಯಕೀಯ ಪ್ರಮಾಣ ಪತ್ರ ಮತ್ತು ಹೈದ್ರಾಬಾದ್ ಕರ್ನಾಟಕ ಮೀಸಲಾತಿ ಪ್ರಮಾಣ ಪತ್ರ ಬಂದ ನಂತರವೇ ಪ್ರಥಮ ವೇತನ ಪ್ರಮಾಣ ಪತ್ರ ವಿತರಿಸಲಾಗುವುದು ಹಾಗೂ ಸದರಿ ದಾಖಲೆಗಳು ಸುಳ್ಳು ಅಥವಾ ಖೊಟ್ಟಿ ಎಂಬುದಾಗಿ ತಿಳಿದು ಬಂದಲ್ಲಿ, ಅಭ್ಯರ್ಥಿಯ ನೇಮಕಾತಿಯನ್ನು **ಯಾವುದೇ ಮುನ್ಸೂಚನೆ ನೀಡದೇ ರದ್ದುಗೊಳಿಸಲಾಗುವುದು.**

5. ಮೇಲ್ಕಂಡ ಅಭ್ಯರ್ಥಿಯ ಪರೀಕ್ಷಾರ್ಥ ಅವಧಿಯು ಎರಡು ವರ್ಷಗಳಾಗಿರುತ್ತದೆ. ಈ ಅವಧಿಯಲ್ಲಿ ಪರೀಕ್ಷಾರ್ಥಿಯು ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ)ಯ ವೃಂದ-ಎ (ಕಿರಿಯ ಶ್ರೇಣಿ) ಕಾರ್ಯನಿರ್ವಾಹಕ ಅಧಿಕಾರಿ / ಸಹಾಯಕ ಕಾರ್ಯದರ್ಶಿ ಹುದ್ದೆಗೆ ನಿಗದಿಪಡಿಸಿರುವ ಎಲ್ಲಾ ಇಲಾಖಾ ಪರೀಕ್ಷೆಗಳನ್ನು ಕಡ್ಡಾಯವಾಗಿ ತೇರ್ಗಡೆಯಾಗತಕ್ಕದ್ದು.

6. ಈ ನೇಮಕಾತಿಯು ತಾತ್ಕಾಲಿಕವಾಗಿದ್ದು, ಕಾಲಕಾಲಕ್ಕೆ ಜಾರಿಯಲ್ಲಿರುವ / ಜಾರಿಗೆ ಬರುವ ನಿಯಮ / ಆದೇಶಗಳ ಅಧೀನಕ್ಕೆ ಒಳಪಟ್ಟಿರುತ್ತದೆ.

7. ದಿನಾಂಕ: 01.04.2006 ನಂತರ ಸರ್ಕಾರಿ ಸೇವೆಗೆ ನೇಮಕ ಹೊಂದುವವರಿಗೆ ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ(ಎಸ್.ಪಿ.ಎಲ್) 01 ಪಿಇಟಿ 2005 .ದಿನಾಂಕ: 31.03.2006 ರಲ್ಲಿನ ನೂತನ ಪಿಂಚಣಿ ಯೋಜನೆ (ಎನ್.ಪಿ.ಎಸ್.) ಅನ್ವಯವಾಗುತ್ತದೆ.

8. ಈ ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾಗುವ ಸಂಬಂಧ ಯಾವುದೇ ಪ್ರಯಾಣ ಭತ್ಯೆಯನ್ನು ಪಡೆಯಲು ಅರ್ಹನಿರುವುದಿಲ್ಲ.

9. ಅಭ್ಯರ್ಥಿಯು ಈಗಾಗಲೇ ಸರ್ಕಾರಿ ಸೇವೆಯಲ್ಲಿರುವುದರಿಂದ ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರ ಮೂಲಕ ಅರ್ಜಿ ಸಲ್ಲಿಸಿದ ಬಗ್ಗೆ ಹಾಗೂ ಈ ರೀತಿ ಅರ್ಜಿ ಸಲ್ಲಿಸುವಾಗ ನಿಯಮಗಳನ್ನು ಉಲ್ಲಂಘಿಸಿ ಸಲ್ಲಿಸಿರುವುದಿಲ್ಲವೆಂಬ ಬಗ್ಗೆ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

10. ಮೇಲ್ಕಂಡ ಅಭ್ಯರ್ಥಿಯು ಸೇವಾ ಪ್ರತಿಜ್ಞಾ ವಿಧಿ ಸ್ವೀಕರಿಸತಕ್ಕದ್ದು ಮತ್ತು ಬಹುಪತ್ನಿತ್ವವನ್ನು ಹೊಂದಿಲ್ಲದಿರುವ ಬಗ್ಗೆ ಸ್ವಯಂಘೋಷಣೆ ಮಾಡತಕ್ಕದ್ದು.

11. ಇತ್ತೀಚಿನ 2 ಪಾಸ್ ಪೋರ್ಟ್ ಅಳತೆಯ ಭಾವ ಚಿತ್ರಗಳು ಮತ್ತು ವಿವಾಹಿತರಾಗಿದ್ದಲ್ಲಿ, ಪತಿ - ಪತ್ನಿಯ ಜಂಟಿ ಭಾವಚಿತ್ರವನ್ನು (ಸ್ಟುಡಿಯೋದಲ್ಲಿ ತೆಗೆಸಿರುವ) ಕರ್ತವ್ಯಕ್ಕೆ ಹಾಜರಾಗುವ ಸಂದರ್ಭದಲ್ಲಿ ಹಾಜರುಪಡಿಸತಕ್ಕದ್ದು.

12. ಈ ಅಭ್ಯರ್ಥಿಯು ನೀಡಿರುವ ಅಥವಾ ನೀಡುವ ಯಾವುದೇ ಮಾಹಿತಿ / ದಾಖಲೆಯ ಯಾವುದೇ ಸಮಯದಲ್ಲಿ ತಪ್ಪು / ಸುಳ್ಳು / ನಕಲಿ ಎಂದು ಕಂಡು ಬಂದಲ್ಲಿ, ಕರ್ನಾಟಕ ಗೆಜೆಟೆಡ್ ಪ್ರೊಬೆಷನರುಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕ) ನಿಯಮಗಳು, 1997 ರ ನಿಯಮ 15 ರನ್ವಯ ತಕ್ಷಣದಿಂದಲೇ ಅಂತಹವರನ್ನು ಸೇವೆಯಿಂದ ತೆಗೆದು ಹಾಕಲು ಕ್ರಮ ಕೈಗೊಳ್ಳಲಾಗುವುದು. ಹಾಗೂ ಅಂತಹವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ನ್ಯಾಯಾಂಗ ಕ್ರಮ ಜರುಗಿಸಲಾಗುವುದು.

.....3

13. ಈ ಅಭ್ಯರ್ಥಿಯು ಸಲ್ಲಿಸಿರುವ ವಿದ್ಯಾರ್ಹತೆ / ಜನ್ಮ ದಿನಾಂಕಗಳ ಮೂಲ ಪ್ರಮಾಣ ಪತ್ರಗಳು ಸರಿ ಇವೆ ಎಂದು ಅಭ್ಯರ್ಥಿಗಳಿಂದ ಶಪಥ ಪತ್ರವನ್ನು (AFFIDAVIT) ಕರ್ತವ್ಯಕ್ಕೆ ಹಾಜರಾಗುವಾಗ ನಿಗದಿತ ನಮೂನೆಯಲ್ಲಿ ಸಲ್ಲಿಸತಕ್ಕದ್ದು.

14. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 154 ಎಸ್‌ಸಿಆರ್ 2014, ದಿನಾಂಕ: 27.04.2015ರನ್ವಯ ಅಭ್ಯರ್ಥಿಯು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ನಿಗದಿತ ಅವಧಿಯಲ್ಲಿ ಪಾಸು ಮಾಡತಕ್ಕದ್ದು.

15. ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 2021 ರಲ್ಲಿನ ನಿಯಮ -28ರ ರೀತ್ಯ ಹಾಗೂ ವಿಧಿಸಿರುವ ಷರತ್ತುಗಳಿಗೆ ಬದ್ಧರಾಗಿರುವ ಬಗ್ಗೆ ಪ್ರಮಾಣ ಪತ್ರವನ್ನು ಹಾಗೂ ಇಬ್ಬರು ಗಣ್ಯ ವ್ಯಕ್ತಿಗಳಿಂದ ಗುಣ ಮತ್ತು ನಡತೆಯ ಬಗ್ಗೆ ಪ್ರಮಾಣ ಪತ್ರವನ್ನು ಕರ್ತವ್ಯಕ್ಕೆ ಹಾಜರಾಗುವ ಸಂದರ್ಭದಲ್ಲಿ ಸಲ್ಲಿಸತಕ್ಕದ್ದು.

16. ಅಭ್ಯರ್ಥಿಯು ಇಲಾಖಾ ವತಿಯಿಂದ ನಿಯೋಜಿಸುವ ತರಬೇತಿಗೆ ಕಡ್ಡಾಯವಾಗಿ ಹಾಜರಾಗತಕ್ಕದ್ದು. ತರಬೇತಿಗೆ ಗೈರು ಹಾಜರಾದಲ್ಲಿ ಅಶಿಸ್ತು ಎಂದು ಪರಿಗಣಿಸಿ, ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

17. ಅಭ್ಯರ್ಥಿಯ ನೇಮಕಾತಿ / ಆಯ್ಕೆ ಬಗ್ಗೆ ಯಾವುದೇ ನ್ಯಾಯ ಮಂಡಳಿ / ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇದ್ದಲ್ಲಿ, ಈ ನೇಮಕಾತಿಯು ಸದರಿ ನ್ಯಾಯಮಂಡಳಿ / ನ್ಯಾಯಾಲಯಗಳು ನೀಡುವ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ.

**18. ಈ ನೇಮಕಾತಿ ಆದೇಶವನ್ನು ನೋಂದಾಯಿತ ಅಂಚೆ ಮೂಲಕ ರವಾನಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಅಭ್ಯರ್ಥಿಗಳು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, 3ನೇ ಮಹಡಿ, 3ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು ಇವರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು, ತಪ್ಪಿದ್ದಲ್ಲಿ ಅಭ್ಯರ್ಥಿಯ ನೇಮಕಾತಿಯು ತಂತಾನೆ ರದ್ದಾಗುವುದು.**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

07/04/2022

**(ಶಕುಂತಲಾ ಚೌಗಲಾ)**
ಸರ್ಕಾರದ ಉಪ ಕಾರ್ಯದರ್ಶಿ(ಆಡಳಿತ-2)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು-560 001
2. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು
3. ಮಹಾನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.

. . . ..4

4. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಪಾರ್ಕ್‌ಹೌಸ್, ಬೆಂಗಳೂರು-01
5. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ತರಬೇತಿ ಕೇಂದ್ರ ಲಲಿತ್ ಮಹಲ್ ರಸ್ತೆ, ಮೈಸೂರು, ಮೈಸೂರು ಜಿಲ್ಲೆ.
7. ಸರ್ಕಾರದ ಉಪ ಕಾರ್ಯದರ್ಶಿ (ಸೇವೆಗಳು) ಸಿಆಸು ಇಲಾಖೆ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ(ಸೇವೆಗಳು-7) ವಿಧಾನಸೌಧ, ಬೆಂಗಳೂರು
9. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಗೋಪುರ ಪೋಡಿಯಂ ಬ್ಲಾಕ್ ಬೆಂಗಳೂರು,
10. ನಿರ್ದೇಶಕರು, ಕರ್ನಾಟಕ ಸರ್ಕಾರ ವಿಮಾ ಇಲಾಖೆ, ವಿಶ್ವೇಶ್ವರಯ್ಯ ಗೋಪುರ ಪೋಡಿಯಂಬ್ಲಾಕ್ ಬೆಂಗಳೂರು.
11. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಕೆ.ಆರ್. ವೃತ್ತ, ಬೆಂಗಳೂರು
12. ಸಂಬಂಧಿಸಿದ ಅಭ್ಯರ್ಥಿಗೆ (ನೊಂದಾಯಿತ ಅಂಚೆ ಸ್ವೀಕೃತಿ ಬಾಕಿ ಮುಖಾಂತರ)
13. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ,
14. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಉಪ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.